# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆಮ್ ಆದ್ಮಿ ಬೀಮಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಿದ್ಧಪಡಿಸಿರುವ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ತಗುಲುವ ವೆಚ್ಚವನ್ನು ಪಾವತಿಸುವ ಬಗ್ಗೆ.

**ಓದಲಾದ:** 1) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 25 ಡಿಎಸ್‌ಪಿ 2008,ದಿನಾಂಕ:31/03/2008.

2) ದಿನಾಂಕ:12/01/2010 ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಇ-ಆಡಳಿತದ ವಾರ್ಷಿಕ ಕ್ರಿಯಾ ಯೋಜನೆಗಳ ಅನುಮೋದನೆಯ ಅಧಿಕಾರಯುತ ಸಮಿತಿಯ ನಡಾವಳಿಗಳು.

3) ಕಿಯೋನಿಕ್ಸ್ ಹಾಗೂ ಕಂದಾಯ ಇಲಾಖೆ, ಕರ್ನಾಟಕ ಸರ್ಕಾರದ ನಡುವೆ ನಡೆದಿರುವ ಒಪ್ಪಂದ ದಿನಾಂಕ:19/03/2010.

4) ಪತ್ರ ಸಂಖ್ಯೆ: KSEDC/Comml/137/10-11, Date:16/07/2010.

5) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 68 ಡಿಎಸ್‌ಪಿ 2009, ದಿನಾಂಕ:25/09/2010.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದನ್ವಯ ಆಮ್ ಆದ್ಮಿ ಬೀಮಾ ಯೋಜನೆಯನ್ನು ಭಾರತ ಸರ್ಕಾರವು ಭಾರತೀಯ ಜೀವನ ಬೀಮಾ ನಿಗಮ ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದೊಂದಿಗೆ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಗ್ರಾಮೀಣಾ ಭೂ ರಹಿತ ಕುಟುಂಬಗಳಿಗೆ ಆರ್ಥಿಕ ನೆರವಿಗಾಗಿ ಜಾರಿಗೆ ತರಲಾಗಿದೆ. ಸದರಿ ಯೋಜನೆಯಡಿ ಈಗಾಗಲೇ 6 ಲಕ್ಷ ಫಲಾನುಭವಿಗಳನ್ನು ಗುರುತಿಸಲಾಗಿದ್ದು, ಇವರಿಗೆ ಗುರುತಿನ ಚೀಟಿಯನ್ನು ವಿತರಿಸಲಾಗಿದೆ. ಫಲಾನುಭವಿಗಳ ವಿಮೆಯ ಮೊತ್ತವನ್ನು ಇತ್ಯರ್ಥ ಗೊಳಿಸುವುದು ಮತ್ತು ಪ್ರತಿ ವರ್ಷ ಫಲಾನುಭವಿಗಳ ವಿಮೆಯನ್ನು ನವೀಕರಿಸುವುದು ಹಾಗೂ ವಿದ್ಯಾರ್ಥಿ ವೇತನಕ್ಕೆ ಅರ್ಹರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಕ್ರೋಢೀಕರಿಸಿ ಅದರಂತೆ ನಿಯಂತ್ರಿಸುವುದು, ಒಟ್ಟಾರೆ ಫಲಾನುಭವಿಗಳ ಸಮಗ್ರ ಮಾಹಿತಿಯನ್ನು ಗಣಕೀಕರಣಗೊಳಿಸುವ ಸಲುವಾಗಿ ಸೂಕ್ತ ತಂತ್ರಾಂಶವನ್ನು ಸಿದ್ಧಪಡಿಸಲು ಕಿಯೋನಿಕ್ಸ್ ಸಂಸ್ಥೆಯೊಂದಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಂತೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಒಪ್ಪಂದದಂತೆ ಪ್ರತಿ ಫಲಾನುಭವಿಗಳಿಗೆ ತಲಾ 10.00 ರೂಪಾಯಿಗಳ ದರದಲ್ಲಿ ಪ್ರಸ್ತುತ 6.00 ಲಕ್ಷ ಫಲಾನುಭವಿಗಳಿಗೆ ಒಟ್ಟಾರೆ 10 ವರ್ಷಗಳಿಗೆ ₹.60.00 ಲಕ್ಷಗಳ ವೆಚ್ಚವಾಗುತ್ತದೆ. ಮೊದಲನೇ ಹಂತವಾಗಿ ಶೇಕಡಾ 50 ರಷ್ಟು ಹಣವನ್ನು ಅಂದರೆ ₹.30.00 ಲಕ್ಷಗಳನ್ನು (ತೆರಿಗೆ ಪ್ರತ್ಯೇಕ) ನೀಡಬೇಕಾಗಿರುತ್ತದೆ. ಆದರೆ ಒಪ್ಪಂದದ ಪ್ರಕಾರ ಸೂಕ್ತ ಸಂಸ್ಥೆಯಿಂದ ತಂತ್ರಾಂಶದ ಸೆಕ್ಯೂರಿಟಿ ಹಾಗೂ ಇತರೆ ಅಂಶಗಳ ಬಗ್ಗೆ ದೃಢೀಕರಣ ಹಾಗೂ ಎಲ್.ಐ.ಸಿ. ಸಂಸ್ಥೆಯಿಂದ ತಂತ್ರಾಂಶದ ಕಾರ್ಯನಿರ್ವಾಹಣೆಯ ಬಗ್ಗೆ ದೃಢೀಕರಣ ಪತ್ರಗಳನ್ನು ನೀಡದೆ ಇರುವ ಕಾರಣಕ್ಕಾಗಿ ಶೇಕಡಾ 25 ರಷ್ಟು ಹಣವನ್ನು ಅಂದರೆ ₹.15.00 ಲಕ್ಷಗಳು + ತೆರಿಗೆಗಳನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಸರ್ಕಾರಿ ಆದೇಶದನ್ವಯ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಆಮ್ ಆದ್ಮಿ ಬೀಮಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಿದ್ಧಪಡಿಸಿರುವ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಉಳಿದ ಶೇಕಡಾ 25 ರಷ್ಟು ಹಣವನ್ನು ಅಂದರೆ ₹.15.00 ಲಕ್ಷಗಳು + ತೆರಿಗೆಗಳನ್ನು ಲೆಕ್ಕ ಶೀರ್ಷಿಕೆ 2235-60-110-5-01-051 ರಡಿಯಲ್ಲಿ ಭರಿಸಲು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 68 ಡಿಎಸ್‌ಪಿ 2009, ಬೆಂಗಳೂರು. ದಿನಾಂಕ:13/04/2011.**

ಸರ್ಕಾರವು ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆಮ್ ಆದ್ಮಿ ಬೀಮಾ ಯೋಜನೆಯ ಸಮಗ್ರ ಮಾಹಿತಿಯನ್ನು ಗಣಕೀಕರಣ ಗೊಳಿಸುವ ತಂತ್ರಾಂಶವನ್ನು ಅಭಿವೃದ್ಧಿ ಪಡಿಸುವ ಕುರಿತು ಕಿಯೋನಿಕ್ಸ್ ಸಂಸ್ಥೆಯವರಿಗೆ ₹.15.00, ತೆರಿಗೆ ಪ್ರತ್ಯೇಕ (ರೂಪಾಯಿ ಹದಿನೈದು ಲಕ್ಷಗಳು ಮಾತ್ರ)

122

ಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ. ಇದಕ್ಕೆ ತಗುಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-60-110-5-01-051 ರಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಎಫ್‌ಡಿ 1 ಡಿಎಫ್‌ಪಿ 1996, ದಿನಾಂಕ:10/07/1996 ರನ್ವಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

13/4/11

**(ಎಸ್.ಕಾತ್ಯಾಯಿನಿ ದೇವಿ)**
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ.

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು.**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ.
5. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ವ್ಯವಸ್ಥಾಪಕರು, ಕಿಯೋನಿಕ್ಸ್ ಸಂಸ್ಥೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
8. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.